ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:667/2025

ಚಾಸಾ:1 ಪ್ರಾಸಾ:1

ದಿನಾಂಕ: 20.11.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಗೋವಿಂದ ಹೆಗ್ಡೆ |
| ತಂದೆಯ ಹೆಸರು | : | ಅಣ್ಣಪ್ಪ ಶೇರಿಗಾರ |
| ವಯಸ್ಸು | : | 65 ವರ್ಷ |
| ಉದ್ಯೋಗ | : | ಕೃಷಿ |
| ವಾಸ ಸ್ಥಳ | : | ಉಳ್ಳೂರು |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ಆರೋಪಿತರ ಪರಿಚಯವಿದೆ. ನಮ್ಮ ಮತ್ತು ಆರೋಪಿತರ ನಡುವೆ ಯಾವುದೇ ಗಲಾಟೆ ನಡೆದಿರುವುದಿಲ್ಲ. ಆರೋಪಿಗಳು ನನ್ನನ್ನು ಅಡ್ಡಗಟ್ಟಿಲ್ಲ, ಅವಾಚ್ಯ ಶಬ್ದಗಳಿಂದ ಬೈದಿಲ್ಲ, ಜೀವ ಬೆದರಿಕೆ ಹಾಕಿಲ್ಲ, ಹಲ್ಲೆ ಮಾಡಿಲ್ಲ. ನಾನು ಆರೋಪಿತರ ವಿರುದ್ದ ಯಾವುದೇ ದೂರನ್ನು ನೀಡಿಲ್ಲ ಹಾಗೂ ಹೇಳಿಕೆಯನ್ನು ನೀಡಿರುವುದಿಲ್ಲ.

ಸಾಕ್ಷಿಗೆ ಕಡತದಲ್ಲಿರುವ ದೂರು, ಪಂಚನಾಮೆ, ಪೋಟೋ ದಾಖಲೆಗಳನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಸದ್ರಿ ದಾಖಲೆಗಳನ್ನು ನಿಪಿ-1 ರಿಂದ 3 ಎಂದು, ಅವುಗಳಲ್ಲಿನ ಸಾಕ್ಷಿಯ ಸಹಿಗಳನ್ನು ನಿಪಿ-1(ಎ) ಮತ್ತು 2(ಎ) ಎಂದು ಗುರುತಿಸಲಾಯಿತು. ಸದ್ರಿ ದಾಖಲೆಯಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಸದ್ರಿ ದಾಖಲೆಗಳಿಗೆ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ: 15-03-2025 ರಂದು ಬೆಳಗ್ಗೆ 11 ಗಂಟೆಗೆ ನಾನು ನನ್ನ ಮನೆಯ ಬಳಿ ರಸ್ತೆಯಲ್ಲಿ ನಿಂತು ಬೇಲಿಯಲ್ಲಿರುವ ಅಕೇಶಿಯಾ ಮರದ ಗೆಲ್ಲು ಕಡಿಯುತ್ತಿರುವಾಗ 1ನೇ

ಆರೋಪಿ ನನ್ನನ್ನು ಹಿಂದಿನಿಂದ ಬಂದು ಅಡ್ಡಗಟ್ಟಿ ತಡೆದು ನಿಲ್ಲಿಸಿ, ತಳ್ಳಿದ್ದರಿಂದ ನಾನು ಕವಚಿ ಬಿದ್ದಿದ್ದು, ನನಗೆ ಅವಾಚ್ಯ ಶಬ್ದಗಳಿಂದ ನಿಂಧಿಸಿ ನೀನೇನು ಕರೆಂಟು ಹಾಕಲು ತಕರಾರು ಮಾಡುವುದು, ನಿನಗೆ ಬಹಳ ಸೊಕ್ಕು ಬಂದಿದೆ ಎಂದು ನನ್ನ ಸೊಂಟಕ್ಕೆ ತುಳಿದಿರುತ್ತಾನೆ ಎಂದರೆ ಸರಿಯಲ್ಲ. ಆ ಸಮಯದಲ್ಲಿ ಚಾಸಾ-2 ರಿಂದ 4 ರವರು ಬಂದು ಹೊಡೆಯದಂತೆ ತಡೆದಾಗ 1ನೇ ಆರೋಪಿ ಈವತ್ತು ನೀನು ಬಚವ್ ಆದಿ, ನಿನ್ನನ್ನು ಕೊಲ್ಲದೆ ಬಿಡುವುದಿಲ್ಲ ನೋಡು ಎಂದು ಬೆದರಿಕೆ ಹಾಕಿರುತ್ತಾನೆ ಎಂದರೆ ಸರಿಯಲ್ಲ. ಅದೇ ಸಮಯದಲ್ಲಿ ಅಲ್ಲಿಯೇ ನಿಂತಿದ್ದ 2ನೇ ಆರೋಪಿ ನನಗೆ ಹೊಡಿ ಬಿಡಬೇಡ ಎಂದು ಅವಾಚ್ಯ ಶಬ್ದಗಳಿಂದ ನಿಂಧಿಸಿ 1ನೇ ಆರೋಪಿಗೆ ಹೇಳಿರುತ್ತಾನೆ ಎಂದರೆ ಸರಿಯಲ್ಲ. ಆಗ ಚಾಸಾ-2 ರಿಂದ 4ರವರು 2ನೇ ಆರೋಪಿತನಲ್ಲಿ ನನಗೆ ಯಾಕೆ ಹೊಡೆದಿದ್ದು ಎಂದು ವಿಚಾರಿಸಿದಾಗ 2ನೇ ಆರೋಪಿ ಅವಾಚ್ಯ ಶಬ್ದಗಳಿಂದ ಅವರಿಗೂ ಬೈದು ನೀವು ಯಾರು ಕೇಳಲು ಎಂದು ಚಾಸಾ-3 ರವರ ಕೈ ಹಿಡಿದು ಎಳೆದಿರುತ್ತಾನೆ ಎಂದರೆ ಸರಿಯಲ್ಲ. ಆಗ ಚಾಸಾ-2 ರವರು ತಪ್ಪಿಸಲು ಬಂದಾಗ ಅವರನ್ನು ತಳ್ಳಿ ಅಲ್ಲಿಂದ ಹೊರಟು ಹೋಗಿರುತ್ತಾನೆ ಎಂದರೆ ಸರಿಯಲ್ಲ. ನಂತರ ನನ್ನನ್ನು ಮನೆಗೆ ಕರೆದುಕೊಂಡು ಹೋಗಿ ಅನಂತರ ನಾನು ವಿಶ್ರಾಂತಿ ಪಡೆದಿದ್ದು, ಹಲ್ಲೆಯ ಪರಿಣಾಮ ನನಗೆ ಬೆನ್ನು ನೋವು ಉಲ್ಬಣಗೊಂಡು ದಿಃ 17-03-2025 ರಂದು ನನ್ನನ್ನು ಚಾಸಾ-2 ಮತ್ತು 3 ರವರು ಸೇರಿ ಕುಂದಾಪುರ ಸರಕಾರಿ ಆಸ್ಪತ್ರೆಗೆ ದಾಖಲಿಸಿದಾಗ ಪೊಲೀಸರು ಬಂದು ನಿಪಿ-1 ರಂತೆ ನನ್ನ ಹೇಳಿಕೆ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ದಿಃ 19-03-2025 ರಂದು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದು, ನಾನು ತೋರಿಸಿದ ಸ್ಥಳದಲ್ಲಿ ಚಾಸಾ-5 ಮತ್ತು 6 ರವರ ಸಮಕ್ಷಮ ಸಂಜೆ 5-20 ರಿಂದ 6ರವರೆಗೆ ಪಂಚನಾಮೆ ಜರುಗಿಸಿ ಪೋಟೋ ತೆಗೆದು ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ದಿಃ 19-03-2025 ರಂದು ನಾನು ನೀಡಿದ ದೂರಿಗೆ ಸಂಬಂಧಿಸಿದಂತೆ ಘಟನೆ ನಡೆದಾಗ ತೋಟದಲ್ಲಿ ನನ್ನ ಹೆಂಡತಿ ಮತ್ತು ಮಕ್ಕಳು ಇದ್ದರು ಆದರೆ ದೂರಿನಲ್ಲಿ ನನ್ನ ಹೆಂಡತಿ ಇರುವ ವಿಷಯ ತಿಳಿಸಿರಲಿಲ್ಲ ಹಾಗೂ ನನ್ನ ದೂರಿನಲ್ಲಿ 2ನೇ ಆರೋಪಿ ನನ್ನ ರಟ್ಟೆ ಹಿಡಿದು ಎಳೆದಿರುವುದಾಗಿ ನಮೂದಿಸಿದ್ದು, ಅದು ತಪ್ಪಾಗಿದ್ದು ನನ್ನ ಮಗಳಾದ ಸವಿತಾ-ಚಾಸಾ-3ರವರ ಕೈ

ರಟ್ಟೆ ಹಿಡಿದು ಎಳೆದಿರುವುದಾಗಿ ಮರುಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದ್ರಿ ಮರುಹೇಳಿಕೆಯನ್ನು ನಿಪಿ-4 ಎಂದುಗುರುತಿಸಲಾಯಿತು.

ಈಗ ನಾವು ಆರೋಪಿತರೊಂದಿಗೆ ರಾಜಿ ಮಾಡಿಕೊಂಡಿರುತ್ತೇವೆ ಎಂದರೆ ಸರಿ. ಆ ಕಾರಣಕ್ಕೆ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ . ದಂ. ಕುಂದಾಪುರ**